**ಕರ್ನಾಟಕ ಸರ್ಕಾರ**

**ಕೇಂದ್ರೀಕೃತ ದಾಖಲಾತಿ ಘಟಕ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ,**

**ಕೆಂಪೇಗೌಡ ರಸ್ತೆ, ಬೆಂಗಳೂರು–೫೬೦ ೦೦೯.**

ದೂರವಾಣಿ ಸಂಖ್ಯೆ: 080–22483140, 22483145 ಇ–ಮೇಲ್ ವಿಳಾಸ: cackarnataka1@gmail.com

---

**ಸಂ. ಸಿಎಸಿ-5/ಬಿ.ಇಡಿ.ದಾ/3/2025-26** **ದಿನಾಂಕ: 25/11/2025**

**ಪ್ರಕಟಣೆ**

2025ನೇ ಸಾಲಿನ ಬಿ. ಇಡಿ. ದಾಖಲಾತಿ ಸಂಬಂಧ ಮೊದಲ ಸೀಟು ಹಂಚಿಕೆ ಪಟ್ಟಿಯನ್ನು https://schooleducation.karnataka.gov.in/ ರಲ್ಲಿ ಬಿಡುಗಡೆಗೊಳಿಸಿದೆ. ಅಭ್ಯರ್ಥಿಗಳು ಹಂಚಿಕೆಯಾದ ಕಾಲೇಜುಗಳಿಗೆ ಸೇರಬಯಸಿದಲ್ಲಿ ತಮ್ಮ ಯೂಸರ್ ಐಡಿ ಮತ್ತು ಪಾಸ್ ವರ್ಡನ್ನು ಬಳಸಿ **ದಿನಾಂಕ: 25/11/2025 ರಿಂದ ದಿನಾಂಕ: 05/12/2025ರವರೆಗೆ** ನಿಗದಿತ ಶುಲ್ಕದ ಚಲನನ್ನು ಮುದ್ರಿಸಿಕೊಂಡು ಸ್ಟೇಟ್ ಬ್ಯಾಂಕಿನ ಯಾವುದೇ ಶಾಖೆಯಲ್ಲಿ ಪಾವತಿಸಿ ಅದರ ಮೂಲ ಪ್ರತಿ ಹಾಗೂ ಇತರೆ ಎಲ್ಲಾ ಮೂಲ ದಾಖಲೆಗಳೊಂದಿಗೆ ಸಂಬಂಧಿಸಿದ **ಜಿಲ್ಲಾ ನೋಡಲ್ ಕೇಂದ್ರಕ್ಕೆ** ಹಾಜರಾಗಿ ದಾಖಲಾತಿ ಪತ್ರವನ್ನು ಪಡೆದುಕೊಳ್ಳುವುದು ಹಾಗೂ ನಿಗದಿತ ದಿನಾಂಕದೊಳಗೆ ಸಂಬಂಧಿಸಿದ ಕಾಲೇಜಿಗೆ ಸೇರ್ಪಡೆಗೊಳ್ಳಲು ಸೂಚಿಸಿದೆ.

ಮೊದಲ ಸುತ್ತಿನ ಆಯ್ಕೆಯಲ್ಲಿ ಹಂಚಿಕೆಯಾದ ಕಾಲೇಜಿಗೆ ಸೇರಲು ಬಯಸದೇ ಇರುವ ಅಭ್ಯರ್ಥಿಗಳು ತಮ್ಮ ಯೂಸರ್ ಐಡಿ ಮತ್ತು ಪಾಸ್ ವರ್ಡನ್ನು ಬಳಸಿ ***'Opted for the Second Round'*** ಎಂದು **ದಿನಾಂಕ: 25/11/2025 ರಿಂದ ದಿನಾಂಕ: 05/12/2025ರೊಳಗೆ** ತಮ್ಮ ಅಭಿಮತವನ್ನು ದಾಖಲಿಸುವುದು. **'Opted for the Second Round'** ಎಂದು ಅಭಿಮತವನ್ನು ದಾಖಲಿಸದೇ ಇರುವ ಅಭ್ಯರ್ಥಿಗಳನ್ನು ಬಿಟ್ಟು ಎರಡನೇ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು.

ಮೊದಲ ಪಟ್ಟಿಯ ಹಂಚಿಕೆ ಪ್ರಕಾರ ಸೇರ್ಪಡೆಯಾಗಿ ಉಳಿಕೆಯಾಗಿರುವ ಸೀಟುಗಳ ಕಾಲೇಜುವಾರು **ಸೀಟ್ ಮ್ಯಾಟ್ರಿಕ್ಸನ್ನು** ದಿನಾಂಕ: **08/12//2025ರಂದು** ಬಿಡುಗಡೆಗೊಳಿಸಲಾಗುವುದು. ಇದರಂತೆ ಮೊದಲ ಪಟ್ಟಿಯಲ್ಲಿ ಸೀಟು ಹಂಚಿಕೆಯಾದ ಕಾಲೇಜುಗಳಿಗೆ ***ಸೇರಬಯಸದ 'Opted for the Second Round'*** ಎಂದು ಅಭಿಮತವನ್ನು ದಾಖಲಿಸಿದ ಅಭ್ಯರ್ಥಿಗಳು ತಮ್ಮ ಎರಡನೇ ಮತ್ತು ಕೊನೆಯ ಸೀಟು ಹಂಚಿಕೆಗಾಗಿ **ದಿನಾಂಕ: 08/12/2025ರಿಂದ ದಿನಾಂಕ: 10/12/2025ರವರೆಗೆ ಸೀಟ್ ಮ್ಯಾಟ್ರಿಕ್ಸ್ ಪ್ರಕಾರ** ಕಾಲೇಜುಗಳ ಆಯ್ಕೆಯ option entry ಮಾಡಿಕೊಳ್ಳಲು ಅವಕಾಶವನ್ನು ಕಲ್ಪಿಸಿದೆ. ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಕೋರಿದೆ.

ಜಂಟಿ ನಿರ್ದೇಶಕರು
ಕೇಂದ್ರೀಕೃತ ದಾಖಲಾತಿ ಘಟಕ, ಬೆಂಗಳೂರು